**Akashvani : Bangalore**
**Regional Bulletin In Kannada**
**04.01.2025 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**04.01.2025 / 18.40  hrs**
**<><*<><>*><>**

ಮುಖ್ಯಾಂಶಗಳು

**೧. ಕೇಂದ್ರದ ಪುರಸ್ಕೃತ ಯೋಜನೆಗಳ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವಂತೆ ಸಚಿವ ಹೆಚ್. ಡಿ. ಕುಮಾರಸ್ವಾಮಿ ಕರೆ**

**೨. ವೃಷಭಾವತಿ ನದಿಗೆ ಹರಿಯುತ್ತಿರುವ ಕೊಳಚೆ ನೀರು ನಿಯಂತ್ರಣಕ್ಕೆ ಸಮಗ್ರ ಯೋಜನೆ ರೂಪಿಸುವಂತೆ  ಬಿಬಿಎಂಪಿ ಆಯುಕ್ತರು ಸೂಚನೆ**

**೩. ಮೈಸೂರಿನಲ್ಲಿ ಕೇಂದ್ರ ಗೃಹ ಸಚಿವಾಲಯದ ದಕ್ಷಿಣ, ನೈಋತ್ಯ ಅಧಿಕೃತ ಭಾಷಾ ಸಮ್ಮೇಳನ**

**೪. ಗುತ್ತಿಗೆದಾರನ ಆತ್ಮಹತ್ಯೆ ಪ್ರಕರಣ ; ಬಿಜೆಪಿಯಿಂದ ರಾಜ್ಯಾದ್ಯಂತ ಪ್ರತಿಭಟನೆ**

**೫. ಮಂಗಳೂರಿನಲ್ಲಿ ಅಂತಾರಾಜ್ಯ ಗೆಡ್ಡೆ ಗೆಣಸು ಸೊಪ್ಪಿನ ಮೇಳಕ್ಕೆ ಚಾಲನೆ**

**<><*<><>*><>**

ಕೇಂದ್ರ ಸರ್ಕಾರ ಜನರ ಕಲ್ಯಾಣಕ್ಕಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು  ಪುರಸ್ಕೃತ ಯೋಜನೆಗಳ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಬೇಕು ಎಂದು ಎಂದು ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಹೆಚ್.ಡಿ ಕುಮಾರಸ್ವಾಮಿ ತಿಳಿಸಿದ್ದಾರೆ. ಮೈಸೂರು ಜಿಲ್ಲಾ ಅಭಿವೃದ್ಧಿ ಹಾಗೂ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಯೋಜನೆಗಳ ಅನುದಾನವನ್ನು  ಶೇಕಡ ೧೦೦ ರಷ್ಟು ಬಳಕೆ ಮಾಡುವ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯ ನಿರ್ವಹಿಸಬೇಕು ಎಂದು ಸೂಚಿಸಿದ್ದಾರೆ. ಏರ್ ಪೋರ್ಟ್ ಅಥಾರಿಟಿ ಆಫ್ ಇಂಡಿಯಾಗೆ ವಿಮಾನ ನಿಲ್ದಾಣ ಮೇಲ್ದರ್ಜೆಗೆ ಏರಿಸಲು ಅಗತ್ಯವಿದ್ದ ಭೂಮಿಯನ್ನು ವಶಕ್ಕೆ ಪಡೆದು ಕೆಐಡಿಬಿ ಒದಗಿಸಬೇಕು. ನಾಗನಹಳ್ಳಿ ರೈಲ್ವೆ ನಿಲ್ದಾಣವನ್ನು ಮೇಲ್ದರ್ಜೆಗೆ ಏರಿಸಲು ಅಗತ್ಯವಿರುವ ಭೂಸ್ವಾಧೀನ ಅಗತ್ಯವಿರುವ ಪೂರ್ಣಗೊಳಿಸುವಂತೆ ರೈಲ್ವೆ ಅಧಿಕಾರಿಗಳಿಗೆ ಸೂಚಿಸಿದರು. ಜಲ ಜೀವನ್ ಮಿಷನ್ ಯೋಜನೆಯು ಪ್ರತಿ ಮನೆಗೂ ನಲ್ಲಿಯ ಮೂಲಕ ನೀರನ್ನು ನೀಡುವ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು ಎಲ್ಲಾ ಹಳ್ಳಿಗಳಿಗೂ ನೀರು ಒದಗಿಸುವಂತೆ ತಿಳಿಸಿದರು. ಅಮೃತ್ ಯೋಜನೆಯಡಿ ನಗರ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರಿನ ಪೂರೈಕೆಗೆ ಅನುದಾನ ಬಿಡುಗಡೆ ಆಗಿದ್ದು ನಿಗದಿತ ಅವಧಿಯೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸಿ ನೀರಿನ ಪೂರೈಕೆ ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

**<><*<><>*><>**

ವೃಷಭಾವತಿ ನದಿಗೆ ಕೊಳಚೆ ನೀರು ಸೇರಿ ಕಲುಷಿತ ಆಗುವುದನ್ನು ತಪ್ಪಿಸುವ ಸಲುವಾಗಿ ಸಮಗ್ರ ಯೋಜನೆ ರೂಪಿಸಲು ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ರವರು ಜಲಮಂಡಳಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ವೃಷಭಾವತಿ ನದಿ ಪುನಶ್ಚೇತನಕ್ಕೆ ಸಂಬಂಧಿಸಿದಂತೆ ಇಂದು ನಡೆದ ಸಭೆಯಲ್ಲಿ ಮಾತನಾಡಿದ ಅವರು, ಪಾಲಿಕೆ, ಜಲಮಂಡಳಿ, ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಸಮನ್ವಯ ಸಾಧಿಸಿಕೊಂಡು ಸಮಗ್ರ ಯೋಜನೆ ರೂಪಿಸಲು ಸಲಹೆ ನೀಡಿದ್ದಾರೆ.

**ಧ್ವನಿ : ತುಷಾರ್ ಗಿರಿನಾಥ್**

ನದಿ ಪಕ್ಕದಲ್ಲಿ ಎಷ್ಟು ವಸತಿ ಸಮ್ಮುಚ್ಛಯಗಳು ಬರಲಿವೆ, ಖಾಸಗಿ ಅಪಾರ್ಟ್ಮೆಂಟ್ ಗಳಿಂದ ತ್ಯಾಜ್ಯ ನೀರು ನೇರವಾಗಿ ಬರುತ್ತಿದೆಯೇ ಎಂಬುದನ್ನು ಪರಿಶೀಲಿಸಬೇಕು. ಜೊತೆಗೆ ಅಪಾರ್ಟ್ಮೆಂಟ್‌ಗಳಲ್ಲಿ ಅಳವಡಿಸಿರುವ ತ್ಯಾಜ್ಯನೀರು ಸಂಸ್ಕರಣಾ ಘಟಕಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿವೆ ಎಂಬುದನ್ನು ಪರಿಶೀಲನೆ ನಡೆಸಲು ನಿರ್ದೇಶನ ನೀಡಿದ್ದಾರೆ. ವೃಷಭಾವತಿ

ನದಿಗೆ ಹೊಂದಿಕೊಂಡಂತೆ ೪೨ ಕೆರೆಗಳು ಬರಲಿದ್ದು, ಒತ್ತುವರಿಯಾಗಿರುವ ಪ್ರದೇಶವನ್ನು ಗುರುತಿಸಬೇಕು ಎಂದು ತಿಳಿಸಿದ್ದಾರೆ. ವೃಷಭಾವತಿ ವ್ಯಾಲಿಗೆ ಕಸ ಹಾಕದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ.

<><*<><>*><>

ಭಾರತದ ಎಲ್ಲ ಭಾಷೆಗಳ ಮೇಲೆ ಅಭಿಮಾನ ಇರಿಸಿಕೊಂಡೇ ಸಂಪರ್ಕ ಭಾಷೆಯಾಗಿ ಹಿಂದಿಯನ್ನು ಬೆಳೆಸಬೇಕಿದೆ ಎಂದು ಬಿಹಾರ ರಾಜ್ಯಪಾಲ ಆರಿಫ್ ಮೊಹಮ್ಮದ್ ಖಾನ್ ಪ್ರತಿಪಾದಿಸಿದ್ದಾರೆ. ಮೈಸೂರಿನ ಕೆಎಸ್‌ಒಯು ಘಟಿಕೋತ್ಸವ ಭವನದಲ್ಲಿ ಕೇಂದ್ರ ಗೃಹ ಸಚಿವಾಲಯದ ಅಧಿಕೃತ ಭಾಷಾ ವಿಭಾಗ ಆಯೋಜಿಸಿದ್ದ 'ದಕ್ಷಿಣ ಹಾಗೂ ನೈರುತ್ಯ ವಿಭಾಗದ ಅಧಿಕೃತ ಭಾಷಾ ಸಮ್ಮೇಳನ ಹಾಗೂ ಪ್ರಶಸ್ತಿ ಪ್ರದಾನ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. 'ದೇಶದ ಸಂಸ್ಕೃತಿಯ ರಾಯಭಾರಿಯಾಗಿರುವ ಎಲ್ಲಾ ಭಾಷೆಗಳನ್ನು ಕಲಿಯಲು ಮುಂದಾದಾಗ ಮಾತ್ರವೇ ವೈವಿಧ್ಯತೆ ಅರಿಯಲು ಸಾಧ್ಯವಾಗುತ್ತದೆ ಎಂದರು. ಆಂಧ್ರಪ್ರದೇಶ, ಕರ್ನಾಟಕ, ತೆಲಂಗಾಣ, ಕೇರಳ, ತಮಿಳುನಾಡು, ಪಾಂಡಿಚೇರಿ, ಲಕ್ಷದ್ವೀಪದ ಕೇಂದ್ರ ಸರ್ಕಾರದ ಕಚೇರಿಗಳು, ಬ್ಯಾಂಕ್‌ಗಳಲ್ಲಿ ಭಾಷಾ ಅನುಷ್ಠಾನಗೊಳಿಸಿದ ೩೨ ಉತ್ತಮ ಅಧಿಕಾರಿಗಳು ಹಾಗೂ ಸಿಬ್ಬಂದಿ ಸನ್ಮಾನಿಸಿ, ಪ್ರಮಾಣ ಪತ್ರ ನೀಡಲಾಯಿತು. ಕಾರ್ಯಕ್ರಮದಲ್ಲಿ ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ, ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಸೇರಿದಂತೆ ಹಲವು ಗಣ್ಯರು ಪಾಲ್ಗೊಂಡಿದ್ದರು.

<><*<><>*><>

ಗುತ್ತಿಗೆದಾರನ ಆತ್ಮಹತ್ಯೆ ಖಂಡಿಸಿ ಹಾಗೂ ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆ ಒತ್ತಾಯಿಸಿ ಬಿಜೆಪಿ ಇಂದು ರಾಜ್ಯಾದ್ಯಂತ ಪ್ರತಿಭಟನೆ ನಡೆಸಿತು. ಪ್ರತಿಪಕ್ಷ ನಾಯಕ ಆರ್. ಅಶೋಕ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ನಡೆದ ಪ್ರತಿಭಟನೆಯಲ್ಲಿ ಸರ್ಕಾರ ಪಾರದರ್ಶಕ ತನಿಖೆ ನಡೆಸಿ ಗುತ್ತಿಗೆದಾರನ ಕುಟುಂಬಕ್ಕೆ ನ್ಯಾಯ ಒದಗಿಸುವಂತೆ ಆಗ್ರಹಿಸಲಾಯಿತು. ಶಿವಮೊಗ್ಗದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗುತ್ತಿಗೆದಾರನ ಕುಟುಂಬಕ್ಕೆ ನ್ಯಾಯ ಒದಗಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು. ಸಚಿವ ಪ್ರಿಯಾಂಕ ಖರ್ಗೆ ರಾಜೀನಾಮೆ ನೀಡಬೇಕು, ಬಸ್ ದರ ಏರಿಕೆ ವಿರೋಧಿಸಿ ಹಾಗೂ ಪುನರ್ ನೇಮಕವಾದ ಬೆಳಗಾವಿ ತಹಶೀಲ್ದಾರ್ ಅಮಾನತ್ತಿಗೆ ಆಗ್ರಹಿಸಿ ಬಿಜೆಪಿ ಕಾರ್ಯಕರ್ತರು ಬೆಳಗಾವಿಯಲ್ಲಿ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿದರು.

<><*<><>*><>

ನೀರಾವರಿ ಸಲಹಾ ಸಮಿತಿಯ ನಿರ್ಣಯದಂತೆ ತುಂಗಭದ್ರಾ ಎಡದಂಡೆಯ ಕಾಲುವೆಯಲ್ಲಿ ಹರಿಸಲಾಗುತ್ತಿರುವ ೩ ಸಾವಿರದ ೮೦೦ ಕ್ಯೂಸೆಕ್ ನೀರು ಕೊನೆಯ ಭಾಗದ ರೈತರಿಗೂ ಸಮರ್ಪಕವಾಗಿ ಸರಬರಾಜು ಆಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಭೋಸರಾಜು ಸೂಚನೆ ನೀಡಿದ್ದಾರೆ. ಹೊಸಪೇಟೆಯಲ್ಲಿ ಮಾತನಾಡಿದ ಅವರು, ರೈತರಿಗೆ ಸಮರ್ಪಕವಾಗಿ ನೀರು ದೊರೆಯಲು ಗೇಜ್ ಕಾಲುವೆ ಗೇಜ್ ನಿರ್ವಹಣೆ ಮಾಡುವುದು ಬಹಳ ಅವಶ್ಯಕವಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><*<><>*><>

ಎರಡು ದಿನಗಳ ಕಾಲ ಆಯೋಜಿಸಿರುವ ಅಂತಾರಾಜ್ಯ ಗೆಡ್ಡೆ ಗೆಣಸು ಮತ್ತು ಸೊಪ್ಪಿನ ಮೇಳಕ್ಕೆ ಮಂಗಳೂರಿನಲ್ಲಿ ಇಂದು ಚಾಲನೆ ದೊರೆತಿದೆ. ಮೇಳದಲ್ಲಿ ಕರ್ನಾಟಕದ ವಿವಿಧ ಜಿಲ್ಲೆಗಳು ಸೇರಿದಂತೆ ಆಂಧ್ರಪ್ರದೇಶ, ಪಶ್ಚಿಮ ಬಂಗಾಳ, ಒರಿಸ್ಸಾ, ಕೇರಳ ಮುಂತಾದೆಡೆಯಿಂದ ಕೃಷಿಕರು ತಾವು ಬೆಳೆಸಿದ ಉತ್ಪನ್ನಗಳೊಂದಿಗೆ ಮೇಳದಲ್ಲಿ ಪಾಲ್ಗೊಂಡಿದ್ದಾರೆ. ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ, ಉಪ್ಪಳ ಕೊಂಡೆವೂರು ಮಠದ ಯೋಗಾನಂದ ಸರಸ್ವತಿ ಸ್ವಾಮೀಜಿ, ಸಾವಯವ ಉತ್ಪನ್ನಗಳನ್ನು ಬಳಸುವುದರಿಂದ ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಾಧ್ಯವಿದೆ ಎಂದರು. ಇಂದು ನಾವು ವಿಷವನ್ನೇ ತಿನ್ನುತ್ತಿದ್ದೇವೆ. ಇತರರಿಗೂ ವಿಷವನ್ನೇ ತಿನ್ನಿಸುತ್ತಿದ್ದೇವೆ. ಹೀಗಾಗಿ ಪ್ರತಿಯೊಬ್ಬರೂ ಕೃಷಿಯ ಕಡೆಗೆ ಒಲವು ಹರಿಸಬೇಕು ಎಂದು ಕರೆ ನೀಡಿದರು.

<><*<><>*><>

ರಾಜ್ಯದ ವಿವಿಧ ಕಾಲೇಜುಗಳಲ್ಲಿ ಇಂದು ಕಲ್ಪಿತ ನ್ಯಾಯಾಲಯ ಸ್ಪರ್ಧೆ ಆಯೋಜಿಸಲಾಗುತ್ತಿದ್ದು, ವಾದ ಮಾಡುವಾಗ ಕಾನೂನುಗಳ ಬಗ್ಗೆ ಅರಿವಿರಬೇಕು ಎಂದು ಕರ್ನಾಟಕ ಹೈಕೋರ್ಟಿನ ನಿವೃತ್ತ ನ್ಯಾಯಮೂರ್ತಿ ಬಿ.ಎ. ಪಾಟೀಲ್

ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನಡೆದ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ೧೦ನೇ ರಾಷ್ಟ್ರೀಯ ಕಲ್ಪಿತ ನ್ಯಾಯಾಲಯದ ಸ್ಪರ್ಧೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ಕಾನೂನುಗಳ ಬಗ್ಗೆ ಹೆಚ್ಚು ಹೆಚ್ಚು ಅಧ್ಯಯನ ನಡೆಸಬೇಕು ಎಂದು ಕಿವಿ ಮಾತು ಹೇಳಿದರು.

**ಧ್ವನಿ : ಕರ್ನಾಟಕ ಹೈಕೋರ್ಟಿನ ನಿವೃತ್ತ ನ್ಯಾಯಮೂರ್ತಿ ಬಿ.ಎ. ಪಾಟೀಲ**

**<><*<><>*><>**

ಕೋಲಾರದ ಬಂಗಾರಪೇಟೆ ತಾಲೂಕಿನಲ್ಲಿ ಶಿಥಿಲಗೊಂಡಿರುವ ಶಾಲಾ-ಕಾಲೇಜು, ಅಂಗನವಾಡಿಗಳ ಕಟ್ಟಡಗಳ ಬಗ್ಗೆ ಸೋಮವಾರದೊಳಗೆ ಮಾಹಿತಿ ಒದಗಿಸುವಂತೆ ಶಾಸಕ ಎಸ್.ಎನ್.ನಾರಾಯಣಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಅಂಗನವಾಡಿ ಮೇಲ್ಚಾವಣಿ ಕುಸಿತದಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಅಂಗನವಾಡಿ ಮಕ್ಕಳು ಹಾಗೂ ಅವರ ಕುಟುಂಬದವರನ್ನು ಭೇಟಿ ಮಾಡಿ ಮಾತನಾಡಿದ ಅವರು, ಘಟನೆಗೆ ಕಾರಣವಾದ ಅಂಗನವಾಡಿ ಕಾರ್ಯಕರ್ತೆಯರ ವಿರುದ್ಧ ಕ್ರಮಕೈಗೊಳ್ಳಲು ಅಧಿಕಾರಿಗಳಿಗೆ ಈಗಾಗಲೇ ಸೂಚಿಸಲಾಗಿದೆ ಎಂದರು.

**ಧ್ವನಿ- ಎಸ್.ಎನ್.ನಾರಾಯಣಸ್ವಾಮಿ, ಶಾಸಕ**

**<><*<><>*><>**

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಜಲಜೀವನ್ ಮಿಷನ್ ಯೋಜನೆಯಡಿ ಚಿಕ್ಕಬಳ್ಳಾಪುರ ಜಿಲ್ಲೆಯ ಗ್ರಾಮೀಣ ಭಾಗದ ಪ್ರತಿ ಮನೆಗೂ ನಳ ಸಂಪರ್ಕದ ಮೂಲಕ ಶುದ್ಧ ಕುಡಿಯುವ ನೀರು ಪೂರೈಸಲು ೧ ಸಾವಿರದ ೬೪೦ ಗ್ರಾಮಗಳಿಗೆ ಕೇಂದ್ರ ಸರ್ಕಾರ ೯೮೩ ಕೋಟಿ ರೂಪಾಯಿ ಬಿಡುಗಡೆ ಮಾಡಿದೆ ಎಂದು ಸಂಸದ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ದಿಶಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಲಜೀವನ್ ಮಿಷನ್ ಯೋಜನೆ ಕೇಂದ್ರ ಸರ್ಕಾರದ ದೂರದೃಷ್ಟಿಯ ಮತ್ತು ಮಹತ್ವದ ಯೋಜನೆ. ಈ ಯೋಜನೆಯನ್ನು ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಲು ೧ ಸಾವಿರದ ೬೪೦ ಗ್ರಾಮಗಳಿಗೆ ಒಟ್ಟು ೯೮೩ ಕೋಟಿ ರೂಪಾಯಿ ಬಿಡುಗಡೆಯಾಗಿದೆ ಎಂದು ಹೇಳಿದ್ದಾರೆ.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ರಾಜ್ಯ ಸರ್ಕಾರವು ಶೇಕಡ ೧೫ ರಷ್ಟು ಬಸ್ ದರ ಹೆಚ್ಚಳ ಮಾಡಿ ಸಾಮಾನ್ಯ ಜನರು ತತ್ತರಿಸುವಂತಾಗಿದೆ. ಕೂಡಲೇ ಬಸ್ ದರ ಹೆಚ್ಚಳ ಆದೇಶವನ್ನು ಹಿಂಪಡೆಯುವಂತೆ ಆಗ್ನೇಯ ಪದವೀಧರ ಕ್ಷೇತ್ರದ ಅಭ್ಯರ್ಥಿ ಕಲ್ಲಂಡೂರು ಡಾ.ಕೆ ನಾಗರಾಜ್ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

೨. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಹಯೋಗದಲ್ಲಿ 'ವಿಶ್ವಮಾನವ ದಿನಾಚರಣೆ ಮತ್ತು ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.